**ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಎಂ. ಎಲ್. ಅನಿಲ್ ಕುಮಾರ್ ಇವರು ನಿಯಮ 72ರ ಅಡಿಯಲ್ಲಿ ಗಮನ ಸೆಳೆಯುವ ಸೂಚನೆಗೆ ಸರ್ಕಾರದ ಹೇಳಿಕೆ**

******

**ಸೂಚನೆ:-**

"ಬಯಲು ಸೀಮೆ ಪ್ರದೇಶಾಭಿವೃದ್ಧಿ ಮಂಡಳಿಯ ವ್ಯಾಪ್ತಿಗೆ ಒಳಪಡುವ ವಿಧಾನಸಭಾ ಸದಸ್ಯರು ಮತ್ತು ವಿಧಾನ ಪರಿಷತ್ತಿನ ಸದಸ್ಯರಿಗೆ ಸರ್ಕಾರದಿಂದ ಪ್ರತಿ ವರ್ಷ ರೂ.100 ಲಕ್ಷ ಅನುದಾನ ಬಿಡುಗಡೆ ಮಾಡಲಾಗುತ್ತದೆ. ಈ ಅನುದಾನದಲ್ಲಿ ಮಣ್ಣು ಮತ್ತು ನೀರು ಸಂರಕ್ಷಣೆಯ ಕಾಮಗಾರಿಗಳಿಗೆ ಆದ್ಯತೆ ನೀಡಲಾಗುತ್ತಿದ್ದು, ಇವು ಸಾರ್ವಜನಿಕ ಮಹತ್ವದ ಕಾಮಗಾರಿಗಳಾಗಿವೆ. 2022-23ನೇ ಸಾಲಿನಲ್ಲಿ ಸರ್ಕಾರದಿಂದ ಮಂಡಳಿಗೆ ಬಿಡುಗಡೆಯಾಗಿರುವ ಅನುದಾನವನ್ನು ಕೆಲವು ಕ್ಷೇತ್ರಗಳಿಗಷ್ಟೇ ಅಲ್ಪ ಪ್ರಮಾಣದ ಅನುದಾನ ಬಿಡುಗಡೆ ಮಾಡಿದ್ದು, ಕೆಲವು ಸದಸ್ಯರುಗಳಿಗೆ ಇಲ್ಲಿಯವರೆಗೆ ಯಾವುದೇ ಅನುದಾನ ಬಿಡುಗಡೆ ಮಾಡಿರುವುದಿಲ್ಲ. ಈ ಮಂಡಳಿಯು ನಿಗಧಿತ ಮಿತಿಗಿಂತ ಹೆಚ್ಚುವರಿ ಕಾಮಗಾರಿಗಳಿಗೆ ಅನುಮೋದನೆಯನ್ನು ನೀಡುವ ಮೂಲಕ ಅವ್ಯವಹಾರಗಳಲ್ಲಿ ತೊಡಗಿಸಿಕೊಂಡಿರುವುದು ಕಂಡುಬಂದಿರುತ್ತದೆ. ಇದರಿಂದಾಗಿ ಶಾಸಕರುಗಳ ಕಾರ್ಯವ್ಯಾಪ್ತಿಯಲ್ಲಿ ಸಾರ್ವಜನಿಕ ಮಹತ್ವದ ಕಾಮಗಾರಿಗಳನ್ನು ಕೈಗೊಳ್ಳುವಲ್ಲಿ ಹಿನ್ನಡೆಯಾಗಿರುವ ಕುರಿತು ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಸಚಿವರ ಗಮನವನ್ನು ಸೆಳೆಯಲು ಅನುಮತಿ ನೀಡುವಂತೆ ಕೋರುತ್ತೇನೆ".

**ಉತ್ತರ:-**

ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿಗೆ 2022-23ನೇ ಸಾಲಿನಲ್ಲಿ 99 ಶಾಸಕರುಗಳಿಗೆ (ಮಾನ್ಯ ವಿಧಾನಸಭಾ/ವಿಧಾನ ಪರಿಷತ್ ಸದಸ್ಯರು) ತಲಾ ರೂ.1.00 ಕೋಟಿಯಂತೆ ಅನುದಾನ ಹಂಚಿಕೆ ಮಾಡಲಾಗಿದ್ದು, ಮಂಡಳಿಯಿಂದ ಸ್ವೀಕೃತಗೊಂಡ ರೂ.99.00 ಕೋಟಿ ಕಾಮಗಾರಿಗಳ (ಮಣ್ಣು ಮತ್ತು ನೀರು ಸಂರಕ್ಷಣೆ ಕಾಮಗಾರಿಗಳು ಸೇರಿದಂತೆ) ಕ್ರಿಯಾಯೋಜನೆಗೆ ಸರ್ಕಾರದಿಂದ ಅನುಮೋದನೆ ನೀಡಲಾಗಿದೆ. ಆದರೆ, ಮಂಡಳಿಯ ಕಾರ್ಯದರ್ಶಿಗಳು ಮಂಡಳಿಯ ಹಂತದಲ್ಲಿ ನಿರ್ಣಯ ಕೈಗೊಂಡು ಸರ್ಕಾರದ ಅನುಮೋದನೆ ಇಲ್ಲದೇ ಸುಮಾರು ರೂ.362.53 ಕೋಟಿಗಳ ಕಾಮಗಾರಿಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಿದ್ದ ಕಾರಣದಿಂದ ಮಂಡಳಿಯ ಕಾರ್ಯದರ್ಶಿ, ಉಪ ಕಾರ್ಯದರ್ಶಿ ಮತ್ತು ವಿಷಯ ನಿರ್ವಾಹಕರನ್ನು ಅಮಾನತ್ತು ಮಾಡಿ ಇಲಾಖಾ ವಿಚಾರಣೆಗೆ ಆದೇಶ ಮಾಡಲಾಗಿದೆ.

ಮಂಡಳಿಯಲ್ಲಿ ಹೆಚ್ಚುವರಿಯಾಗಿ ಮಂಜೂರಾತಿ ನೀಡಿ ಅನುದಾನ ಬಿಡುಗಡೆಯಾಗದ ಕಾರಣದಿಂದ ಪ್ರಾರಂಭವಾಗದ ರೂ.224.05 ಕೋಟಿಗಳ 2374 ಕಾಮಗಾರಿಗಳನ್ನು ರದ್ದುಪಡಿಸಲಾಗಿದ್ದು, ಅನುದಾನ ಬಿಡುಗಡೆ ಮಾಡಿರುವ ಹಾಗೂ ಪ್ರಾರಂಭವಾಗಿರುವ ಕಾಮಗಾರಿಗಳನ್ನು ಮುಂದುವರೆದ ಕಾಮಗಾರಿಗಳೆಂದು ಪರಿಗಣಿಸಿ, ಹೆಚ್ಚುವರಿಯಾಗಿ ರೂ.150.00 ಕೋಟಿಗಳ ಅನುದಾನವನ್ನು ಮಂಜೂರು ಮಾಡಲು ಆರ್ಥಿಕ ಇಲಾಖೆಯನ್ನು ಕೋರಲಾಗಿತ್ತು.

2023-24ನೇ ಸಾಲಿನಲ್ಲಿ ಮಂಡಳಿಗೆ ನಿಗದಿಯಾಗಿರುವ ರೂ.39.50ಕೋಟಿಗಳನ್ನು ಪ್ರತಿ ಕ್ಷೇತ್ರಕ್ಕೆ ರೂ.35.00 ಲಕ್ಷಗಳಂತೆ ಮುಂದುವರೆದ ಕಾಮಗಾರಿಗಳಿಗೆ ಆಧ್ಯತೆ ನೀಡಿ ಅನುದಾನ ಹಂಚಿಕೆ ಮಾಡಿ ವೆಚ್ಚ ಮಾಡಲು ಕ್ರಮವಹಿಸಲಾಗಿದೆ.

ಮಾನ್ಯ ಶಾಸಕರುಗಳ ಕಾರ್ಯ ವ್ಯಾಪ್ತಿಯಲ್ಲಿ ಸಾರ್ವಜನಿಕರ ಮಹತ್ವದ ಕಾಮಗಾರಿಗಳನ್ನು ಕೈಗೊಂಡಿರುವುದಕ್ಕೆ ಹಣ ಪಾವತಿಸುವ ಉದ್ದೇಶಕ್ಕಾಗಿ ರೂ.150.00 ಕೋಟಿಗಳನ್ನು ಹೆಚ್ಚುವರಿಯಾಗಿ 2024-25ನೇ ಸಾಲಿನ ಆಯವ್ಯಯದಲ್ಲಿ ನಿಗದಿಪಡಿಸಲು ಮಾನ್ಯ ಮುಖ್ಯಮಂತ್ರಿಗಳನ್ನು ಕೋರಲಾಗಿರುತ್ತದೆ.

ಪ್ರಸ್ತುತ ಮಂಡಳಿಯ ಕಾರ್ಯದರ್ಶಿ, ಉಪ ಕಾರ್ಯದರ್ಶಿ ಮತ್ತು ವಿಷಯ ನಿರ್ವಾಹಕರನ್ನು ಮಂಡಳಿಯ ಹುದ್ದೆಗಳಿಂದ ಬಿಡುಗಡೆ ಮಾಡಿ ಅವರ ಮಾತೃ ಇಲಾಖೆಗಳಿಗೆ ಅವರ ಸೇವೆಯನ್ನು ಹಿಂದಿರುಗಿಸಲಾಗಿರುತ್ತದೆ.

**(ಸಂಖ್ಯೆ: ಪಿಡಿಎಸ್ 14 ಪಿಟಿಪಿ 2024)**

**(ಡಿ.ಸುಧಾಕರ್)**
**ಯೋಜನೆ,ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಸಚಿವರು.**